ಆ) ಕೃಷಿ ಕಾಲೇಜುಗಳನ್ನು ರಾಜ್ಯದಲ್ಲಿ ಪ್ರಾರಂಭಿಸುವ ವಿಚಾರ ಸರ್ಕಾರದ ಮುಂದಿದೆಯೇ?

ಇ) ಹಾಗಿದ್ದಲ್ಲಿ ಕೊಪ್ಪಳದಲ್ಲಿ ಕೃಷಿ ಕಾಲೇಜು ಪ್ರಾರಂಭಿಸಲು ಸರ್ಕಾರ ಕ್ರಮ ತೆಗೆದು ಕೊಳ್ಳುವುದೇ?

ಶ್ರೀ ಟಿ.ಬಿ. ಜಯಚಂದ್ರ (ಕೃಷಿ ಸಚಿವರು) :

ಅ) ಕೊಪ್ಪಳದಲ್ಲಿ ತೋಟಗಾರಿಕೆ ಅಭಿವೃದ್ಧಿಗಾಗಿ ಈಗಾಗಲೇ ಅನೇಕ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಾಗಿದೆ. ತೋಟಗಾರಿಕೆ ಇಲಾಖೆಯವರು ಪ್ರಸಕ್ತ ವರ್ಷದಲ್ಲಿ ಕೊಪ್ಪಳ ತಾಲ್ಲೂಕಿನಲ್ಲಿ ತೋಟಗಾರಿಕೆ ಅಭಿವೃದ್ಧಿಗಾಗಿ 22 ಯೋಜನೆಗಳನ್ನು ರಾಜ್ಯವಲಯ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ಕೈಗೊಂಡಿರುತ್ತದೆ. ಈ ಎಲ್ಲಾ ಯೋಜನೆಗಳಲ್ಲಿ ರೂ. 9,645 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ. ಕೊಪ್ಪಳ ಭಾಗದಲ್ಲಿ ದ್ರಾಕ್ಷಿ, ದಾಳಿಂಬೆ, ನಿಂಬೆ, ಪಪ್ಪಾಯಿ, ಮಾವು ತರಕಾರಿ ಬೆಳೆಗಳು, ವಾಣಿಜ್ಯ ಪುಷ್ಪಗಳು ಹಾಗೂ ಇತರೆ ತೋಟಗಾರಿಕೆ ಬೆಳೆಗಳನ್ನು ಬೆಳೆಸಲು ರೈತರಿಗೆ ಇಲಾಖೆಯ ಅಧಿಕಾರಿಗಳ ಮೂಲಕ ತಾಂತ್ರಿಕ ಮಾಹಿತಿ ನೀಡುವುದರ ಜೊತೆಗೆ ತರಬೇತಿಯನ್ನೂ ಸಹಾ ನೀಡಲಾಗುತ್ತಿದೆ. ಇಲ್ಲಿಯವರೆಗೆ ಕೊಪ್ಪಳ ತಾಲ್ಲೂಕಿನಲ್ಲಿ 2686 ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆ ಬೆಳೆಗಳನ್ನು ಬೆಳೆಸಲಾಗುತ್ತಿದೆ. ಕೊಪ್ಪಳ ತಾಲ್ಲೂಕಿನಲ್ಲಿ ಗಿಣಿಗೇರಾ ಮತ್ತು ಮುನಿರಾಬಾದ್ ತೋಟಗಾರಿಕೆ ಕ್ಷೇತ್ರಗಳಲ್ಲಿ ಉತ್ತಮ ಗುಣಮಟ್ಟದ ತೋಟಗಾರಿಕೆ ಕಸಿ ಸಸಿಗಳನ್ನು ಉತ್ಪಾದಿಸಿ ವಿತರಿಸಲಾಗುತ್ತಿದೆ.

ಆ) ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಹಂತ ಹಂತವಾಗಿ ಕ್ರಮ ಕೈಗೊಳ್ಳಲು ಪರಿಶೀಲಿಸಲಾಗುವುದು.

ಇ) ಈ ರೀತಿಯ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

ದೇವದಾಸಿಯರ ಪುನರ್‌ವಸತಿ

504 - ಶ್ರೀ. ಖಾದ್ರಿ ಎಸ್.ಎಸ್. (ಶಿಗ್ಗಾಂವ್) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ದೇವದಾಸಿಯರ ಒಟ್ಟು ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡಿರಿ)

ಆ) ದೇವದಾಸಿಯರ ಪುನರ್ವಸತಿಗಾಗಿ ಸರ್ಕಾರ ರೂಪಿಸಿದ ಕಾರ್ಯಕ್ರಮಗಳೇನು?

ಇ) ದೇವದಾಸಿಯರಿಗಾಗಿ ಅಥವಾ ಅವರ ಮಕ್ಕಳಿಗಾಗಲಿ ಸರ್ಕಾರದ ಹುದ್ದೆಗಳನ್ನು ಮೀಸಲಿಡುವ ಪ್ರಸ್ತವನೆ ಸರ್ಕಾರದ ಮುಂದಿದೆಯೇ?

ಈ) ಪುನರ್ವಸತಿ ಕಲ್ಪಿಸಲಾದ ದೇವದಾಸಿಯರ ಸಂಖ್ಯೆ ಎಷ್ಟು?

ಉ) ಸರ್ಕಾರಿ ನೌಕರಿಯಲ್ಲಿರುವ ದೇವದಾಸಿಯರ ಸಂಖ್ಯೆ ಎಷ್ಟು?

ಶ್ರೀಮತಿ. ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ರಾಜ್ಯದಲ್ಲಿರುವ ದೇವದಾಸಿಯರ ಒಟ್ಟು ಸಂಖ್ಯೆ : 22,235 ಜಿಲ್ಲಾವಾರು ಈ ಕೆಳಕಂಡಂತೆ ಇರುತ್ತದೆ :

	ಜಿಲ್ಲೆಗಳು	ದೇವದಾಸಿಯರ ಸಂಖ್ಯೆ
1)	ಬೆಳಗಾಂ	2984
2)	ಬಿಜಾಪುರ	1942
3)	ಬಾಗಲಕೋಟೆ	4804
4)	ಬಳ್ಳಾರಿ	1635
5)	ರಾಯಚೂರು	7374
6)	ಧಾರವಾಡ	2505
7)	ಗುಲ್ಬರ್ಗಾ	991
	ಒಟ್ಟು	**22,235**

ಆ) ದೇವದಾಸಿಯರ ಪುನರ್ವಸತಿಗಾಗಿ ಸರ್ಕಾರ ರೂಪಿಸಿದ ಕಾರ್ಯಕ್ರಮಗಳು ಈ ಕೆಳಕಂಡಂತೆ ಇದೆ :

1) ಕೈಮಗ್ಗ ನೇಯ್ಗೆ ತರಬೇತಿ ಕಾರ್ಯಕ್ರಮ.

2) ಕೈಮಗ್ಗ ನೇಯ್ಗೆ ತರಬೇತಿ ಪಡೆದ ದೇವದಾಸಿ ಮಹಿಳೆಯರಿಗೆ ವಸತಿ ಕಾರ್ಯಾಗಾರಗಳ ನಿರ್ಮಾಣ.

3) ಉತ್ಪನ್ನಕರ ಚಟುವಟಿಕೆಗಳು.

4) ತರಬೇತಿ ಮತ್ತು ಉತ್ಪಾದನಾ ಕಾರ್ಯಕ್ರಮ

5) ಜಾಗೃತಿ ಕಾರ್ಯಕ್ರಮ.

6) ದೇವದಾಸಿ ಮಹಿಳೆಯರ ಆರೋಗ್ಯ ಶಿಬಿರಗಳು.

7) ಸ್ವಸಹಾಯ ಗುಂಪುಗಳ ರಚನೆ.

8) ಸ್ವಯಂ ಉದ್ಯೋಗ ಯೋಜನೆ, ಭೂ ಒಡೆತನ ಯೋಜನೆ ಮತ್ತು ಮನೆ ಮತ್ತು ಕೊಟ್ಟಿಗೆಗಳ ನಿರ್ಮಾಣ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದೆ.

ಇ) ಇಲ್ಲ.

ಈ) ಪುನರ್ವಸತಿ ಕಲ್ಪಿಸಲಾದ ದೇವದಾಸಿಯರ ಸಂಖ್ಯೆ 18,208.

ಉ) ಈ ವಿಷಯದಲ್ಲಿ ಸಮೀಕ್ಷೆ ನಡೆಸಿರುವುದಿಲ್ಲ.

ಅಂಗನವಾಡಿ ಕಾರ್ಯಕರ್ತೆಯರ ವೇತನ

505 - ಶ್ರೀ ಖಾದ್ರಿ ಎಸ್.ಎಸ್. (ಶಿಗ್ಗಾಂವ್) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ಕೊಡಿ)?

ಆ) ಅಂಗನವಾಡಿ ಕಾರ್ಯಕರ್ತೆಯರ ಸೇವೆ ಖಾಯಂಗೊಳಿಸುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೆ?

ಇ) ಅಂಗನವಾಡಿ ಕಾರ್ಯಕರ್ತೆಯರ ಸೇವೆ ಖಾಯಂಗೊಳಿಸಿದ್ದಲ್ಲಿ ಸರ್ಕಾರದ ಬೊಕ್ಕಸಕ್ಕೆ ಪ್ರತಿವರ್ಷ ತಗಲುವ ಖರ್ಚು ಎಷ್ಟು?

ಶ್ರೀಮತಿ. ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ಜಿಲ್ಲಾವಾರು ವಿವರಗಳನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ.

ಆ) ಇಲ್ಲ, ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಿಸಿರುವ ಸ್ಪೆಷಲ್ ಲೀವ್ ಪಿಟಿಷನ್ ಬಗ್ಗೆ ಆದೇಶ ಕಾಯಲಾಗಿದೆ.

ಇ) ಉದ್ಭವಿಸುವುದಿಲ್ಲ.